ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

**ಕರ್ನಾಟಕ ವಿಧಾನ ಪರಿಷತ್ತು**
ನೂರ ನಲವತ್ತಮೂರನೆಯ ಅಧಿವೇಶನ
ಗುರುವಾರ, ದಿನಾಂಕ: 4ನೇ ಫೆಬ್ರುವರಿ, 2021

ಕಾವೇರಿ ನೀರಾವರಿ ನಿಗಮದಿಂದ ಕೈಗೊಂಡಿರುವ ಕಾಮಗಾರಿಗಳ ಬಗ್ಗೆ

ಶ್ರೀ ಎಂ.ಎ.ಗೋಪಾಲಸ್ವಾಮಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-

353(443) ಮಾನ್ಯ ಜಲಸಂಪನ್ಮೂಲ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಕಳೆದ 3 ವರ್ಷಗಳಲ್ಲಿ ಕಾವೇರಿ ನೀರಾವರಿ ನಿಗಮದಿಂದ ಹಾರಂಗಿ ಯೋಜನಾ ವೃತ್ತದ ವ್ಯಾಪ್ತಿಯಲ್ಲಿ ಕೈಗೆತ್ತಿಕೊಳ್ಳಲು ಅನುಮೋದನೆ ನೀಡಿರುವ ಕಾಮಗಾರಿಗಳು ಯಾವುವು; ಕಾಮಗಾರಿಗಳ ವೆಚ್ಚವೆಷ್ಟು; ಈ ಕಾಮಗಾರಿಗಳಿಗೆ ಮಂಜೂರಾದ ಅನುದಾನವೆಷ್ಟು; (ಕಾಮಗಾರಿವಾರು ಸಂಪೂರ್ಣ ವಿವರ ನೀಡುವುದು)

(ಆ) ಸದರಿ ಕಾಮಗಾರಿಗಳಿಗೆ ಸರ್ಕಾರ ನಿಗದಿಪಡಿಸಿರುವ Ratio ಗಿಂತ ಹೆಚ್ಚಿನ ಹಣವನ್ನು ಬಿಡುಗಡೆ ಮಾಡಿ ಸರ್ಕಾರದ ಹಣವನ್ನು ದುರುಪಯೋಗ ಮಾಡಿಕೊಂಡಿರುವ ಬಗ್ಗೆ ಮತ್ತು ಈ ಕಾಮಗಾರಿಗಳಲ್ಲಿ ಬಹಳಷ್ಟು ಲೋಪದೋಷಗಳಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಸಂಬಂಧಪಟ್ಟವರ ವಿರುದ್ಧ ಯಾವ ಕ್ರಮ ಕೈಗೊಳ್ಳಲಾಗಿದೆ; (ವಿವರ ನೀಡುವುದು)

(ಇ) ಈ ಕಾಮಗಾರಿಗಳನ್ನು ಪಡೆದಿರುವ ಗುತ್ತಿಗೆದಾರರು/ಏಜೆನ್ಸಿಗಳು ಯಾವುವು; ಈ ಕಾಮಗಾರಿಗಳು ಪ್ರಸ್ತುತ ಯಾವ ಯಾವ ಹಂತಗಳಲ್ಲಿವೆ; ಈ ಕಾಮಗಾರಿಗಳಿಗಾ ಗಿ ಇಲ್ಲಿಯವರೆಗೆ ಬಿಡುಗಡೆ ಮಾಡಿರುವ ಅನುದಾನವೆಷ್ಟು ? (ಕಾಮಗಾರಿವಾರು ಸಂಪೂರ್ಣ ವಿವರ ನೀಡುವುದು)